ಶ್ರೀ ಎಂ. ರಾಜಶೇಖರಮೂರ್ತಿ (ಕಂದಾಯ ಸಚಿವರು):

ಅ) ರಾಜ್ಯದ ಯಾವುದೇ ಜಿಲ್ಲೆಯ ಸಬ್‌ರಿಜಿಸ್ಟ್ರಾರ್ ಕಛೇರಿಗಳಲ್ಲಿ ಸ್ಟಾಂಪ್ ಪೇಪರ್ ಮಾರುವ ವ್ಯವಸ್ಥೆ ಇರುವುದಿಲ್ಲ.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಈಗಾಗಲೇ ಕೈಗೊಳ್ಳಲಾಗಿದೆ. ಪ್ರತಿ ತಾಲ್ಲೂಕಿನ ಉಪಖಜಾನೆಯಲ್ಲಿ ಈ ಅನುಕೂಲ ಇದೆ.

## ಜವಾಹರ್ ರೋಜ್‌ಗಾರ್ ಯೋಜನೆಯ ಬಗ್ಗೆ

**336 (788):** ಶ್ರೀ ಸಿದ್ಧನಗೌಡರ್, ಪಿ. ಸಿ. (ಕಲಘಟಗಿ)

ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಜವಾಹರ್ ರೋಜ್‌ಗಾರ್ ಯೋಜನೆಯ ಕಾಮಗಾರಿಗಳಿಗೆ ಈಗ ಮಂಡಲ ಪಂಚಾಯ್ತಿ ಮೂಲಕ ಹಣ ಕೊಡುತ್ತಾ ಇರುವುದು ನಿಜವೇ ?

ಆ) ಹಾಗಿದ್ದಲ್ಲಿ, ಇದರಿಂದ ಕೆಲಸ ಕಾರ್ಯಗಳು ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಇ) ಹಾಗಿದ್ದಲ್ಲಿ, ಇನ್ನು ಮುಂದೆ ಜವಾಹರ್ ರೋಜ್‌ಗಾರ್ ಯೋಜನೆಯ ಕಾರ್ಯಕ್ರಮಗಳಿಗೆ ನೀಡುವ ಹಣವನ್ನು ಬಿ. ಡಿ. ಒ.ರವರ ಮೂಲಕ ನೀಡಲು ಕ್ರಮ ಕೈಗೊಳ್ಳಲಾಗುವುದೇ ?

ಶ್ರೀ ಎಂ. ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು):

ಅ) ನಿಜ

ಆ) ಬಂದಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

## ಬೆಂಗಳೂರು ದಕ್ಷಿಣ ತಾಲ್ಲೂಕು ತಾವರೆಕೆರೆ ಹೋಬಳಿ ಹುಲುಮೇನ ಹಳ್ಳಿ ಗ್ರಾಮ ಪಂಚಾಯತಿಗೆ ಸೇರಿದ ಸ.ನಂ. 61ರ ವಿಸ್ತೀರ್ಣ

**337 (762):** ಶ್ರೀ ಪಿ. ಸಿ. ಸಿದ್ಧನಗೌಡರ್ (ಕಲಘಟಗಿ)

ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಬೆಂಗಳೂರು ದಕ್ಷಿಣ ತಾಲ್ಲೂಕು ತಾವರೇಕೆರೆ ಹೋಬಳಿ ಹುಲುಮೇನಹಳ್ಳಿ ಗ್ರಾಮ ಪಂಚಾಯ್ತಿಗೆ ಸೇರಿದ ಮಾದಪಟ್ಟ ಗ್ರಾಮದ ಸರ್ವೆ ನಂ. 61ರ ವಿಸ್ತೀರ್ಣ ಎಷ್ಟು ?

ಆ) ಮೇಲ್ಕಂಡ ಜಮೀನಿನ ಸಾಗುವಳಿ ಮಾಡುತ್ತಿರುವ ಸಾಗುವಳಿಗಾರ ಯಾರು ಇವರು ಎಷ್ಟು ವರ್ಷಗಳಿಂದ ಸಾಗುವಳಿ ಮಾಡುತ್ತಿದ್ದಾರೆ ?